ಆ) ಬಂದಿದ್ದಲ್ಲಿ ಈ ರೀತಿಯ ತಾರತಮ್ಯವನ್ನು ಹೋಗಲಾಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ
(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಬೀಡಿ ಕಾರ್ಮಿಕರ ಮಕ್ಕಳಿಗೆ ಮತ್ತು ಮಾಜಿ ಸೈನಿಕರ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ನೀಡುತ್ತಿಲ್ಲ.

ಆ) ಉದ್ಭವಿಸುವುದಿಲ್ಲ.

ಸರ್ವ ಶಿಕ್ಷಣ ಅಭಿಯಾನದಡಿ ಬಿಡುಗಡೆಯಾದ ಅನುದಾನ

287 : (404)

ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿಗೆ ಕಳೆದ 3 ವರ್ಷಗಳಲ್ಲಿ ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ ಯಾವ ಯಾವ ಪ್ರಾಥಮಿಕ ಶಾಲೆಗಳಲ್ಲಿ ಶೌಚಾಲಯ, ಹೆಚ್ಚುವರಿ ಕೊಠಡಿ, ಮುಖ್ಯೋಪಾಧ್ಯಾಯರ ಕೊಠಡಿ, ಸುತ್ತಗೋಡೆಗಳನ್ನು ನಿರ್ಮಾಣ ಮಾಡಲಾಗಿದೆಯೇ? (ವಿವರ ನೀಡುವುದು)

ಆ) ಈ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; (ವಿವರ ನೀಡುವುದು)

ಇ) ಕಾಮಗಾರಿಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಈ ರೀತಿ ವಿಳಂಬ ಮಾಡಿದವರ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ
(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಕಳೆದ 3ವರ್ಷಗಳಲ್ಲಿ ಬೀದರ್ ಜಿಲ್ಲೆಯ ಬಾಲ್ಕಿ ತಾಲ್ಲೂಕಿಗೆ ಶೌಚಾಲಯ, ಹೆಚ್ಚುವರಿ ಕೊಠಡಿ, ಮುಖ್ಯೋಪಾಧ್ಯಾಯರ ಕೊಠಡಿ, ಸುತ್ತುಗೋಡೆಗಳನ್ನು ಮಂಜೂರು ಮಾಡಲಾಗಿದ್ದು, ಈ ಸಂಬಂಧ ವಿವರವಾದ ಪಟ್ಟಿಗಳನ್ನು ಲಗತ್ತಿಸಿದೆ.

ಆ) ಸದರಿ ಕಾಮಗಾರಿಗೆ ಬಿಡುಗಡೆಯಾದ ಅನುದಾನ ರೂ.985.71ಲಕ್ಷ

ಇ) ಬಂದಿದೆ.

ಈ) ವಿಳಂಬ ಮಾಡಿದವರ ಮೇಲೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.

ಪ್ರಾಥಮಿಕ ಶಾಲೆಗಳಲ್ಲಿ ಶೌಚಾಲಯಗಳು

304 : (160)

ಶ್ರೀ ಕುಮಾರಸ್ವಾಮಿ ಕೆ.ಜಿ. (ಶಿವಮೊಗ್ಗ ಗ್ರಾಮಾಂತರ)

ಅ) ಶಿವಮೊಗ್ಗ ಮತ್ತು ಭದ್ರಾವತಿ ತಾಲ್ಲೂಕಿನಲ್ಲಿರುವ ಎಲ್ಲಾ ಸರ್ಕಾರಿ ಪ್ರಥಮಿಕ ಶಾಲೆ ಮತ್ತು ಪ್ರೌಢ ಶಾಲೆಗಳಿಗೆ ಕುಡಿಯುವ ನೀರು, ಶೌಚಾಲಯ, ಆಟದ ಮೈದಾನ ಇತ್ಯಾದಿ ಸೇರಿದಂತೆ ಎಲ್ಲಾ ಮೂಲ ಸೌಕರ್ಯಗಳನ್ನು ಒದಗಿಸ ಲಾಗಿದೆಯೇ: ಈ ಬಗ್ಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಧಿಕೃತ ದೃಢೀಕರಣ ಪತ್ರಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆಯೇ;

ಆ) ಮೇಲ್ಕಂಡ ಶಾಲೆಗಳ ಪೈಕಿ ಬಾಲಕಿಯರಿಗೆ ಪ್ರತ್ಯೇಕವಾದ ಶೌಚಾಲಯ ಇಲ್ಲದಿರುವ ಶಾಲೆಗಳೆಷ್ಟು;(ಶಾಲೆ, ಗ್ರಾಮದ ವಿವರ ನೀಡುವುದು)

ಇ) ಸರ್ಕಾರಿ ಶಾಲೆಗಳಿಗೆ ಸಕಲ ಸೌಕರ್ಯ ಒದಗಿಸಲಾಗಿದೆ ಎಂದು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಸುಳ್ಳು ಪ್ರಮಾಣ ಪತ್ರಗಳನ್ನು ಸಲ್ಲಿಸಲು ಕಾರಣರಾದವರ ವಿರುದ್ಧ ಸರ್ಕಾರವು ತೆಗೆದುಕೊಂಡ ಕ್ರಮಗಳೇನು(ಎಲ್ಲಾ ಶೈಕ್ಷಣಿಕ ಜಿಲ್ಲಾವಾರು ವಿವರ ಒದಗಿಸುವುದು)

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ
(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಶಿವಮೊಗ್ಗ ಮತ್ತು ಭದ್ರಾವತಿ ತಾಲ್ಲೂಕುಗಳಲ್ಲಿರುವ ಎಲ್ಲಾ ಸರ್ಕಾರಿ ಪ್ರಾಥಮಿಕ ಶಾಲೆ ಮತ್ತು ಪ್ರೌಢ ಶಾಲೆಗಳಿಗೆ ಕುಡಿಯುವ ನೀರು, ಶೌಚಾಲಯ, ಆಟದ ಮೈದಾನ ಇತ್ಯಾದಿ ಸೇರಿದಂತೆ ಎಲ್ಲಾ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ. ಹಾಗೂ ಈ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಧಿಕೃತ ದೃಢೀಕರಣ ಪತ್ರಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಆ) ಎಲ್ಲಾ ಶಾಲೆಗಳಲ್ಲೂ ಬಾಲಕಿಯರಿಗೆ ಪ್ರತ್ಯೇಕವಾದ ಶೌಚಾಲಯಗಳನ್ನು ಒದಗಿಸಲಾಗಿದೆ.

ಇ) ಪ್ರಮಾಣ ಪತ್ರಗಳು ನೈಜವಾಗಿರುವುದರಿಂದ ಈ ಬಗ್ಗೆ ಕ್ರಮ ಅಗತ್ಯವಿರುವುದಿಲ್ಲ.